ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 869 (951)
2. ಮಾನ್ಯ ಸದಸ್ಯರ ಹೆಸರು — ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ — 28/09/2020
4. ಉತ್ತರಿಸುವವರು — ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ನಗರ ಪ್ರದೇಶಗಳಲ್ಲಿ ದುಡಿಯುತ್ತಿರುವ ಕಟ್ಟಡ ಕಾರ್ಮಿಕರು ಮತ್ತು ಅವರ ಕುಟುಂಬಸ್ಥರಿಗೆ ಆರೋಗ್ಯ ರಕ್ಷಣೆ ನೀಡುವ ದೃಷ್ಟಿಯಿಂದ 10 "ಮೊಬೈಲ್ ಕ್ಲಿನಿಕ್" ಗಳನ್ನು ಪ್ರಾರಂಭಿಸಲಾಗಿದೆಯೇ:	2020-21 ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ನಗರ ಪ್ರದೇಶಗಳಲ್ಲಿ ದುಡಿಯುತ್ತಿರುವ ಕಟ್ಟಡ ಕಾರ್ಮಿಕರು ಮತ್ತು ಅವರ ಕುಟುಂಬಸ್ಥರಿಗೆ ಆರೋಗ್ಯ ರಕ್ಷಣೆ ನೀಡುವ ದೃಷ್ಟಿಯಿಂದ 10 "ಮೊಬೈಲ್ ಕ್ಲಿನಿಕ್" ಗಳನ್ನು ಪ್ರಾರಂಭಿಸುವ ಕಾರ್ಯ ಪ್ರಗತಿಯಲ್ಲಿದೆ.
ಆ)	ಪ್ರಾರಂಭಿಸಿದ್ದಲ್ಲಿ, ಇದೂವರೆಗೂ ಎಷ್ಟು ಜನ ಕಾರ್ಮಿಕರು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ:	ಮೊಬೈಲ್ ಕ್ಲಿನಿಕ್‌ಗಳು ಇನ್ನೂ ಪ್ರಾರಂಭಗೊಂಡಿರದ ಕಾರಣ ಯಾರೂ ಇದರ ಪ್ರಯೋಜನ ಪಡೆದುಕೊಂಡಿರುವುದಿಲ್ಲ.
ಇ)	ಈ ಯೋಜನೆ ಇನ್ನು ಪ್ರಾರಂಭಿಸದಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು: ವಿಳಂಭಕ್ಕೆ ಕಾರಣಗಳೇನು?	ಮೊಬೈಲ್ ಕ್ಲಿನಿಕ್‌ಗಳನ್ನು ಪ್ರಾರಂಭಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಕೋವಿಡ್-19 ಹಿನ್ನಲೆಯಲ್ಲಿ ಹೊಸ ಯೋಜನೆಗಳ ಅನುಷ್ಠಾನ ವಿಳಂಬವಾಗಿರುತ್ತದೆ.

ಕಾಇ 332 ಎಲ್‌ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು